# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 225 | Pages. 2 | Date: 18-07-2025, FRIDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 225 - ಪುಟಗಳು : 2 - 18 ಜುಲೈ 2025 ಶುಕ್ರವಾರ Ph: 8762954248 ದರ : ₹1


# ಆಧಾರ್ ಕಾರ್ಡ್‌ಗೆ ವಂಶವೃಕ್ಷ ಜೋಡಿಸಿ

## ಬಿಜೆಪಿ ಸಮಾನ ಮನಸ್ಕರ ಪ್ರವಾಸ | ಬಾಂಗ್ಲಾದೇಶಿ ವಲಸಿಗರ ವಿರುದ್ಧ ಜಾಗೃತಿ ಅಭಿಯಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ / ಆಲೂರು: ರಾಷ್ಟ್ರೀಯ ಭದ್ರತೆ ಹಾಗೂ ಜನರ ಸುರಕ್ಷತೆ ವಿಚಾರವಾಗಿರುವುದರಿಂದ ಅಕ್ರಮ ವಲಸಿಗರ ಸಮಸ್ಯೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಆಧಾರ್ ಕಾರ್ಡ್‌ಗೆ ವಂಶವೃಕ್ಷ ಜೋಡಣೆ ಮಾಡಿದರೆ ಕುಟುಂಬಸ್ಥರ ಪೂರ್ವಾಪರ ತಿಳಿಯಬುದು ಎಂದು ಮಾಜಿ ಸಚಿವ ಕುಮಾರ್ ಬಂಗಾರಪ್ಪ ಹೇಳಿದರು.



ಬಿಜೆಪಿ ಸಮಾನ ಮನಸ್ಕ ಗುಂಪಿನ ನಾಯಕರು ಅಕ್ರಮ ಬಾಂಗ್ಲಾದೇಶಿ ವಲಸಿಗರ ವಿರುದ್ಧ ಜಾಗೃತಿ ಅಭಿಯಾನ ಹಮ್ಮಿಕೊಂಡಿದ್ದು ಗುರುವಾರ ಆಲೂರು ತಾಲ್ಲೂಕಿನ ಮಗ್ಗೆ ಗ್ರಾಮದ ವಾಟೆಪುರ, ಕೆಂಚಮ್ಮನ ಹೊಸಕೋಟೆಯ ಡಾ. ಸಂಜಯ್ ಹೆಗ್ಡೆ ಎಸ್ಟೇಟ್ ಹಾಗೂ ಸಕಲೇಶಪುರದ ಕುಂಬ್ರಳ್ಳಿ ಎಸ್ಟೇಟ್‌ಗೆ ಭೇಟಿ ನೀಡಿ ಸ್ಥಳೀಯರಿಂದ ಮಾಹಿತಿ ಸಂಗ್ರಹಿಸಿದರು.

ಕುಂಬ್ರಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರ್ ಬಂಗಾರಪ್ಪ, ಆಧಾರ್‌ಗೆ ವಂಶವೃಕ್ಷ ಸೇರ್ಪಡೆ ಕುರಿತು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸುತ್ತೇವೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೂಂಬಿಂಗ್ ಕಾರ್ಯಾಚರಣೆ ಮೂಲಕ ಅಕ್ರಮ ಬಾಂಗ್ಲಾ ವಲಸಿಗರ ಹೊರಹಾಕಲು ಸರ್ಕಾರ ಕ್ರಮ ವಹಿಸಬೇಕು. ಕೊಡಗು, ಹಾಸನ, ಚಿಕ್ಕಮಗಳೂರು, ವಿಜಯಪುರ ಮತ್ತು ಬೆಂಗಳೂರಿನಲ್ಲಿ ಅಕ್ರಮ ವಲಸಿಗರು ನೆಲೆಸಿರುವ ಬಗ್ಗೆ ಪೊಲೀಸ್ ಇಲಾಖೆಗೆ ಮಾಹಿತಿ ಇದ್ದರೂ ಕ್ರಮಕ್ಕೆ ಮುಂದಾಗಿಲ್ಲ ಎಂದು ದೂರಿದರು.

> ಪಹಲ್ಗಾಮ್ ಘಟನೆ ಬಳಿಕ ಅಕ್ರಮ ವಲಸಿಗರ ಗಡಿಪಾರು ಮಾಡುವಂತೆ ಕೇಂದ್ರ ಸರ್ಕಾರ ಆದೇಶಿಸಿದ್ದರೂ ರಾಜ್ಯದಲ್ಲಿ ಯಾವ ಕ್ರಮ ಕೈಗೊಂಡಿಲ್ಲ. ಅಕ್ರಮ ವಲಸಿಗರು ದೇಶದ ಭದ್ರತೆಗೆ ಧಕ್ಕೆ ತರುತ್ತಿದ್ದಾರೆ. ಸರ್ಕಾರ ತ್ವರಿತವಾಗಿ ಕ್ರಮ ಕೈಗೊಳ್ಳಬೇಕು.
>
> **- ಕುಮಾರ್ ಬಂಗಾರಪ್ಪ, ಮಾಜಿ ಸಚಿವ**

1955ರಲ್ಲಿ ಅಕ್ರಮ ವಲಸಿಗರ ಕಾನೂನು ಬದಲಾಯಿತಾದರೂ 2025ರ ವರೆಗೆ ಮಹತ್ವದ ಬದಲಾವಣೆಯಾಗಿಲ್ಲ. ವಕ್ಫ್ ಮತ್ತು ವಾಲ್ಮೀಕಿ ಹಗರಣದ ವಿರುದ್ಧ ನಮ್ಮ ತಂಡ ಯಶಸ್ವಿ ಹೋರಾಟ ನಡೆಸಿದೆ. ಈಗ ಬಾಂಗ್ಲಾ ವಲಸಿಗರಿಂದ ಆಗುತ್ತಿರುವ ಅನ್ಯಾಯದ ವಿರುದ್ಧ ಹೋರಾಟ ಕೈಗೊಳ್ಳಲಾಗಿದೆ ಎಂದರು.

ಸ್ಥಳೀಯ ಕಾರ್ಮಿಕರು, ವಲಸಿಗರಿಂದಾಗಿ ಕೆಲಸ ಕಡಿಮೆಯಾಗಿದೆ. ಮಾರುಕಟ್ಟೆಯಲ್ಲಿ ಒಂದೇ ಬೆಲೆಗೆ ವಸ್ತು ಖರೀದಿಸುವಂತಹ ಪರಿಸ್ಥಿತಿಗೆ ತಲುಪಿದ್ದೇವೆಂದು ಅಳಲು ತೋಡಿಕೊಂಡಿದ್ದಾರೆ. ಎಸ್ಟೇಟ್ ಮಾಲೀಕರಿಗೆ ಬೆದರಿಕೆ ಹಾಕುತ್ತಿರುವ ವಲಸಿಗರ ವಿರುದ್ಧ ಎಸ್ಟೇಟ್ ಮಾಲೀಕರು ಕ್ರಮ ಜರುಗಿಸಬೇಕು. ಪ್ಲಾಂಟರ್‌ಗಳು ಸ್ಥಳೀಯರಿಗೆ ಉದ್ಯೋಗ ನೀಡಬೇಕು. ಕನ್ನಡಿಗರಿಗೆ ರಕ್ಷಣೆ ಮತ್ತು ಉದ್ಯೋಗ ಒದಗಿಸುವುದು ಸರ್ಕಾರದ ಜವಾಬ್ದಾರಿ ಎಂದರು.

ಆಲೂರು ತಾಲ್ಲೂಕಿನ ವಾಟೆಪುರದಲ್ಲಿ ಮಾತನಾಡಿದ ಮಾಜಿ ಸಚಿವ ಅರವಿಂದ ಲಿಂಬಾವಳಿ, ಉದ್ಯೋಗದ ನೆಪದಲ್ಲಿ ದೇಶದೊಳಗೆ ಪ್ರವೇಶಿಸುವ ವಲಸಿಗರಿಂದ ಭಯ ಶುರುವಾಗಿದೆ. ಇವರಿಂದ ದೇಶದ ಸುರಕ್ಷತೆಗೆ ಧಕ್ಕೆಯಾಗುತ್ತದೆ. ಪಾಸ್ ಪೋರ್ಟ್, ಕೆಲಸದ ನೇಮಕಾತಿ ಪತ್ರವಿಲ್ಲದೆ ಅಕ್ರಮವಾಗಿ ದೇಶದೊಳಗೆ ಬಂದು ಏನು ಮಾಡುತ್ತಾರೆಂಬುದು ಗೊತ್ತಿಲ್ಲ. ಇತ್ತೀಚೆಗೆ ದರೋಡೆ, ಕೊಲೆ ಪ್ರಕರಣಗಳು ಹೆಚ್ಚುತ್ತಿವೆ. ಜೊತೆಗೆ ಸ್ಥಳೀಯರ ಉದ್ಯೋಗಕ್ಕೂ ಹೊಡೆತ ಬೀಳುತ್ತಿದೆ. ತೋಟ, ವ್ಯಾಪಾರ, ಮನೆಗೆಲಸ ಸೇರಿ ಎಲ್ಲಾ ಕಡೆಯೂ ವಲಸಿಗರದ್ದೇ ಪಾರುಪತ್ಯ ಎಂಬಂತಾಗಿದೆ. ಭಾರತದೊಳಗೆ ಬಂದು ತಮಗೆ ಬೇಕಾದ ದಾಖಲಾತಿಗಳನ್ನು ಸಿದ್ಧಪಡಿಸಿಕೊಳ್ಳುತ್ತಿದ್ದಾರೆ. ರಾಜ್ಯ ಸರ್ಕಾರ ತ್ವರಿತ ಕ್ರಮಕ್ಕೆ ಮುಂದಾಗಬೇಕು. ಒಂದು ವೇಳೆ ನಿರ್ಲಕ್ಷ್ಯ ವಹಿಸಿದರೆ ಪೆಡಂಭೂತವಾಗಿ ನಮ್ಮನ್ನು ಕಾಡಲಿದೆ.

> ಐದು ತಂಡಗಳಾಗಿ ಅಕ್ರಮ ವಲಸಿಗರ ವಸತಿ ಪ್ರದೇಶಕ್ಕೆ ಭೇಟಿ ನೀಡುತ್ತಿದ್ದೇವೆ. ಈ ವೇಳೆ ಆಶ್ಚರ್ಯಕರ ಸಂಗತಿಗಳು ಬೆಳಕಿಗೆ ಬಂದಿವೆ. ಸ್ಲಂ ರೀತಿ ವಾಸಸ್ಥಳ ರೂಪಿಸಿಕೊಂಡಿರುತ್ತಾರೆ. ಅವರ ಬಳಿ ನಕಲಿ ಆಧಾರ್ ಕಾರ್ಡ್, ಹಣ ವರ್ಗಾವಣೆ ಮಿಷನ್‌ಗಳು ಪತ್ತೆಯಾಗಿವೆ. ವಲಸಿಗರ ಮೊಬೈಲ್ ಪರಿಶೀಶಿಲಿಸಿದಾಗ ಎಲ್ಲರೂ ಬಾಂಗ್ಲಾದೇಶದ ಪ್ರಜೆಗಳೊಂದಿಗೆ ಮಾತನಾಡಿರುವುದು ಗೊತ್ತಾಗಿದೆ. ಬಾಂಗ್ಲಾದೇಶದವರೊಂದಿಗೆ ಹಣ ವರ್ಗಾವಣೆಯ ವ್ಯವಹಾರ ಹೊಂದಿದ್ದಾರೆ. ಇವರೆಲ್ಲ ಭಾರತೀಯರೇ ಆಗಿದ್ದರೆ ಹೊರ ದೇಶದ ಸಂಪರ್ಕ ಏಕೆ.
>
> **- ಅರವಿಂದ ಲಿಂಬಾವಳಿ, ಮಾಜಿ ಸಚಿವ**



ಪೊಲೀಸ್ ಇಲಾಖೆ ತಕ್ಷಣ ಜಾಗೃತವಾಗಬೇಕು. ಬೇರೆ ಬೇರೆ ರಾಜ್ಯಗಳಲ್ಲೂ ಇದೇ ಪರಿಸ್ಥಿತಿ ಇದೆ. ಚುನಾವಣಾ ಆಯೋಗ ವಲಸಿಗರ ವಿರುದ್ಧ ಕ್ರಮ ಕೈಗೊಳ್ಳುತ್ತಿದೆ. ರಾಜ್ಯ ಸರ್ಕಾರವೂ ಈ ನಿಟ್ಟಿನಲ್ಲಿ ಎಚ್ಚರ ವಹಿಸಬೇಕು ಎಂದು ಆಗ್ರಹಿಸಿದರು.

ಅಕ್ರಮ ಬಾಂಗ್ಲಾದೇಶಿಗರ ವಿರುದ್ಧ ರಾಜ್ಯಾದ್ಯಂತ ಅಭಿಯಾನ ಮಾಡುತ್ತಿದ್ದೇವೆ. ಕಳೆದ ಭಾನುವಾರ ಬೆಂಗಳೂರಿನ ಮಹದೇವಪುರದಲ್ಲಿ ಸಮಾವೇಶ ನಡೆಸಲಾಗಿದೆ. ನುಸುಳುಕೋರರನ್ನು ಅವರ ದೇಶಕ್ಕೆ ವಾಪಾಸ್ ಕಳುಹಿಸಬೇಕೆಂಬುದು ನಮ್ಮ ಆಗ್ರಹ. ಮೂರು ತಿಂಗಳ ಹಿಂದೆ ತೆರೆದಿದ್ದ ವಾರ್ ರೂಂಗೆ 3500 ದೂರುಗಳು ಬಂದಿವೆ.

ಹಾಸನ ಮಾತ್ರವಲ್ಲದೆ ಬೆಂಗಳೂರು, ಚಿಕ್ಕಮಗಳೂರು, ಕೊಡಗು, ವಿಜಯಪುರ ಜಿಲ್ಲೆಗಳಲ್ಲಿ ಅಕ್ರಮ ವಲಸಿಗರು ಇದ್ದಾರೆಂಬ ಮಾಹಿತಿ ತಿಳಿದುಬಂದಿದೆ ಎಂದರು.

ಈ ಬಗ್ಗೆ ಮಾಜಿ ಸಚಿವ ಕುಮಾರ್ ಬಂಗಾರಪ್ಪ ಅವರು ಅಧಿಕಾರಿಗಳ ಜೊತೆ ಚರ್ಚಿಸಿದ್ದಾರೆ. ಈ ವಿಷಯದಲ್ಲಿ ಸಾಕಷ್ಟು ಅಕ್ರಮಗಳು ಕಂಡುಬಂದಿವೆ. ವಾಟೆಪುರ ಎಸ್ಟೇಟ್‌ನಲ್ಲಿ ಕನ್ನಡಿಗರೇ ಕೆಲಸ ಮಾಡುತ್ತಿದ್ದಾರೆ. ಅವರನ್ನು ಪ್ರಶ್ನಿಸಿದಾಗ ಮೊದಲೆಲ್ಲ ವಾರಪೂರ್ತಿ ಕೆಲಸ ಸಿಗುತ್ತಿತ್ತು, ಈಗ ಒಂದು ಎರಡು ದಿನ ಮಾತ್ರ ಕೆಲಸ ಸಿಗುತ್ತಿದೆ ಎನ್ನುತ್ತಿದ್ದಾರೆ. ಕಾಫಿ ಎಸ್ಟೇಟ್ ಸೇರಿ ಬೇರೆ ಬೇರೆ ಕಡೆ ಅಕ್ರಮವಾಗಿ ಬಾಂಗ್ಲಾದೇಶದಿಂದ ಬಂದು ಸೇರಿಕೊಂಡಿದ್ದಾರೆ. ಅವರ ಆಧಾರ್ ಕಾರ್ಡ್ ಪರಿಶೀಲಿಸಿದರೆ ಪಶ್ಚಿಮ ಬಂಗಾಳದ ಗಡಿ ಜಿಲ್ಲೆಯವರು ಎಂದು ತೋರಿಸಿಕೊಂಡಿದ್ದಾರೆ. ಬೇರೆ ಬೇರೆ ರಾಜ್ಯಗಳ ನಕಲಿ ಆಧಾರ್ ಕಾರ್ಡ್ ಮಾಡಿಕೊಂಡಿದ್ದಾರೆ. ಅಸ್ಸಾಂ, ದೆಹಲಿ ಸೇರಿದಂತೆ ಈಗ ಕರ್ನಾಟಕದಲ್ಲಿ ನಕಲಿ ಆಧಾರ್ ಕಾರ್ಡ್‌ಗಳು ಸೃಷ್ಟಿಯಾಗುತ್ತಿವೆ ಎಂದರು.

ಶಾಸಕ ಬಿ.ಪಿ. ಹರೀಶ್, ಜೆಡಿಎಸ್ ಮುಖಂಡ ಎನ್.ಆರ್. ಸಂತೋಷ್, ಭರತ್ ಹಾಗೂ ಇತರ ನಾಯಕರು ಇದ್ದರು.

## ಹಸಿರ ಸಿರಿ ಸಸ್ಯೋತ್ಸವ ನಾಳೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಟೈಮ್ಸ್ ಅಂತಾರಾಷ್ಟ್ರೀಯ ಶಾಲೆ ಹಾಗೂ ರೋಟರಿ ಕ್ಲಬ್ ಆಫ್ ಹಾಸನ್ ರಾಯಲ್ ವತಿಯಿಂದ ಹಸಿರ ಸಿರಿ ಸಸ್ಯೋತ್ಸವವನ್ನು ಜು. 19ರ ಶನಿವಾರ ಶಾಲೆಯಲ್ಲಿ ಆಯೋಜಿಸಲಾಗಿದೆ ಎಂದು ಟೈಮ್ಸ್ ಸಮೂಹ ಸಂಸ್ಥೆಗಳ ಕಾರ್ಯದರ್ಶಿ ಗಂಗಾಧರ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಪ್ರತಿವರ್ಷ 10 ಸಾವಿರ ಗಿಡ ನೆಡುವ ಕಾರ್ಯಕ್ರಮವನ್ನು ಕಳೆದ 2 ವರ್ಷಗಳಿಂದ ಆಚರಿಸಿಕೊಂಡು ಬರಲಾಗುತ್ತಿದೆ. ಮನುಷ್ಯನ ಜೀವನಕ್ಕೆ ಪರಿಸರ ಅತ್ಯವಶ್ಯಕವಾಗಿರುವುದರಿಂದ ಅಭಿಯಾನಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಶಾಲೆಯ ಪ್ರತಿ ಮಗುವಿಗೆ 2 ಸಸಿಗಳನ್ನು ನೀಡಿ ತಮ್ಮ ಮನೆ ಆವರಣದಲ್ಲಿ ನೆಡುವಂತೆ ಸೂಚಿಸಲಾಗಿದೆ ಎಂದರು.

ಚೆನ್ನಾಗಿ ಗಿಡ ಬೆಳೆಸಿದ ಮಗುವಿಗೆ ಶೈಕ್ಷಣಿಕ ವರ್ಷಾಂತ್ಯದಲ್ಲಿ ಪ್ರಮಾಣ ಪತ್ರ ನೀಡಲಾಗುತ್ತದೆ. ಅದರಿಂದ ಮಕ್ಕಳಿಗೆ ಪ್ರಕೃತಿಯ ಜೊತೆ ಒಡನಾಟವೂ ಹೆಚ್ಚುತ್ತದೆ ಹಾಗು ಪರಿಸರದ ಮಹತ್ವವನ್ನು ಮಗು ತಿಳಿದುಕೊಳ್ಳುತ್ತದೆ ಎಂದರು.

ಕಾರ್ಯಕ್ರಮದ ಉದ್ಘಾಟನೆಯನ್ನು ರೋಟರಿ ಕ್ಲಬ್ ಆಫ್ ಹಾಸನ್ ರಾಯಲ್ ಜಿಲ್ಲಾ ಗವರ್ನರ್ ಕೆ. ಪಾಲಾಕ್ಷ ನೆರವೇರಿಸುವರು. ಸಹಾಯಕ ಗವರ್ನರ್ ಮಂಜುನಾಥ್, ವಲಯ ಲೆಫ್ಟಿನೆಂಟ್ ಮಮತ ಪಾಟೀಲ್ ಭಾಗವಹಿಸಲಿದ್ದಾರೆ ಎಂದರು.

ರೋಟರಿ ಕ್ಲಬ್ ಆಫ್ ಹಾಸನ್ ರಾಯಲ್ ಪದಾಧಿಕಾರಿಗಳಾದ ಸುಧೀರ್, ಪಿ. ರವಿಕುಮಾರ್, ಹೆಚ್.ಕೆ. ದಿಲೀಪ್ ಇದ್ದರು.

## ಜಮೀನು ವಿಚಾರಕ್ಕೆ ತಂದೆ, ಮಗನ ಮೇಲೆ ಹಲ್ಲೆ

ಹಾಸನ: ತಾಲ್ಲೂಕಿನ ಈಚಲಹಳ್ಳಿ ಗ್ರಾಮದಲ್ಲಿ ಜಮೀನು ವಿಚಾರವಾಗಿ ವ್ಯಕ್ತಿಯೊಬ್ಬ ತಂದೆ ಹಾಗೂ ಮಗನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಾನೆ.

ಗ್ರಾಮದ ತಿಮ್ಮೇಗೌಡ ಹಾಗೂ ಪುತ್ರ ನಿಂಗರಾಜು ಗಾಯಾಳುಗಳು. ಅದೇ ಗ್ರಾಮದ ಉಮೇಶ ಎಂಬಾತ ಹಲ್ಲೆ ನಡೆಸಿದ್ದಾನೆ.

ಜು. 15ರ ರಾತ್ರಿ 9.30ರ ಸಮಯದಲ್ಲಿ ತಿಮ್ಮೇಗೌಡ ಅವರ ಮನೆ ಬಳಿಗೆ ಬಂದ ಉಮೇಶ ಜಮೀನು ತನ್ನ ಹೆಸರಿಗೆ ಮಾಡಿಕೊಡಬೇಕೆಂದು ವಾಗ್ವಾದ ಶುರು ಮಾಡಿ ಇಟ್ಟಿಗೆಯಿಂದ ತಲೆ ಬುರುಡೆಗೆ ಹೊಡೆದಿದ್ದಾನೆ. ಜಗಳ ಬಿಡಿಸಲು ಬಂದ ನಿಂಗರಾಜು ಅವರ ಕೈ ಹಾಗು ಭುಜಕ್ಕೆ ಹೊಡೆದು ಗಾಯಗೊಳಿಸಿದ್ದಾನೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಶುಂಠಿಗೆ ರೋಗ: ಪರಿಹಾರಕ್ಕಾಗಿ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶುಂಠಿಗೆ ಅಂಗಮಾರಿ ಹಾಗೂ ಬೆಂಕಿ ರೋಗ ಕಾಣಿಸಿಕೊಂಡಿದ್ದು ಸರ್ಕಾರ ಸೂಕ್ತ ಪರಿಹಾರ ಕಲ್ಪಿಸಬೇಕೆಂದು ಆಗ್ರಹಿಸಿ ರಾಜ್ಯ ಹಸಿ ಶುಂಠಿ ವರ್ತಕರ ಮತ್ತು ಬೆಳೆಗಾರರ ಸಂಘದಿಂದ ಗುರುವಾರ ಪ್ರತಿಭಟನೆ ನಡೆಸಲಾಯಿತು.




ಹೇಮಾವತಿ ಪ್ರತಿಮೆಯಿಂದ ಎನ್.ಆರ್. ವೃತ್ತ ಮಾರ್ಗವಾಗಿ ಮೆರವಣಿಗೆಯಲ್ಲಿ ಬಂದ ಪ್ರತಿಭಟನಾಕಾರರು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು. ಸಂಘದ ಜಿಲ್ಲಾ ಉಪಾಧ್ಯಕ್ಷ ಎಂ.ಟಿ. ವಿಶ್ವನಾಥ್ ಮಾತನಾಡಿ, ಜಿಲ್ಲಾದ್ಯಂತ ಹಸಿ ಶುಂಠಿ ಬೆಳೆ ಅಂಗಮಾರಿ ರೋಗ ಮತ್ತು ವೈರಸ್ ಹಾವಳಿಯಿಂದ ನಾಶವಾಗುತ್ತಿದೆ. ರೋಗ ವೇಗವಾಗಿ ಹರಡುತ್ತಿರುವುದರಿಂದ ಯಾವ ಔಷಧಿ ಸಿಂಪಡಿಸಿದರೂ ಪ್ರಯೋಜನವಾಗುತ್ತಿಲ್ಲ. ಬೆಳೆಗಾಗಿ ಹಾಕಿದ್ದ ಬಂಡವಾಳವು ವಾಪಾಸ್ ಬರುವ ನಿರೀಕ್ಷೆಯಿಲ್ಲ ಎಂದರು.

ಜಿಲ್ಲೆಯ ಹಲವು ಕೃಷಿ ಔಷಧ ಮತ್ತು ರಸಗೊಬ್ಬರ ಅಂಗಡಿಗಳು ನಕಲಿ ಮತ್ತು ಕಳಪೆ ಉತ್ಪನ್ನಗಳನ್ನು ಅಧಿಕ ಬೆಲೆಗೆ ಮಾರಾಟ ಮಾಡುತ್ತಿವೆ. ಗುಣಮಟ್ಟ ರಹಿತ ಉತ್ಪನ್ನಗಳಿಂದ ರೋಗ ನಿಯಂತ್ರಣ ಸಾಧ್ಯವಾಗದೆ ಬೆಳೆ ನಾಶವಾಗಿದೆ ಎಂದು ಆರೋಪಿಸಿದರು.

ರೈತರ ಆರ್ಥಿಕ ನಷ್ಟವು ತೀವ್ರಗೊಂಡಿದ್ದು, ರೈತರನ್ನು ಆತ್ಮಹತ್ಯೆಯಂತಹ ಗಂಭೀರ ಸಂಕಷ್ಟಕ್ಕೆ ಸಿಲುಕಿಸಿದೆ. ಸರ್ಕಾರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಜಿಲ್ಲಾ ಮಟ್ಟದ ತಜ್ಞರ ಸಮಿತಿ ರಚಿಸಿ ನಷ್ಟದ ಅಂದಾಜು ನಡೆಸಿ ರೈತರಿಗೆ ತ್ವರಿತ ಆರ್ಥಿಕ ಪರಿಹಾರ ಘೋಷಿಸಬೇಕು ಎಂದು ಆಗ್ರಹಿಸಿದರು.

ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿಗಳು, ರೋಗ ತಜ್ಞರು ಮತ್ತು ಕೀಟ ನಿಯಂತ್ರಣ ತಜ್ಞರ ತಂಡವು ಬೆಳೆ ಪರಿಶೀಲಿಸಿ ಉಳಿದ ಬೆಳೆಯನ್ನು ರಕ್ಷಿಸಲು ತಕ್ಷಣ ಕ್ರಮ ಕೈಗೊಳ್ಳಬೇಕು. ನಕಲಿ ಮತ್ತು ಕಡಿಮೆ ಗುಣಮಟ್ಟದ ಔಷಧಿ ಹಾಗು ರಸಗೊಬ್ಬರ ಮಾರಾಟಗಾರರ ವಿರುದ್ಧ ಕಾನೂನು ಕ್ರಮ, ಪರವಾನಗಿ ರದ್ದತಿ ಮತ್ತು ದಂಡ ವಿಧಿಸುವ ಮೂಲಕ ಎಚ್ಚರಿಕೆ ನೀಡಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಂಘದ ಅಧ್ಯಕ್ಷ ಸೈಯ್ಯದ್ ಜಾಫರ್, ಮೊಹಮ್ಮದ್ ಅಸೀನ್ ಪಾಷಾ, ಸೈಯ್ಯದ್ ಹಫೀಜ್, ಸುಹೇಲ್ ಪಾಷ ಇತರರಿದ್ದರು.

## ಚನ್ನರಾಯಪಟ್ಟಣದಲ್ಲಿ ಜು. 20ಕ್ಕೆ ಯುವ ಪರ್ವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಚನ್ನರಾಯಪಟ್ಟಣದ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಜು. 20ರ ಭಾನುವಾರ ಜಿಲ್ಲಾ ಯುವ ಕಾಂಗ್ರೆಸ್ ವತಿಯಿಂದ ಯುವ ಪರ್ವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಯುವ ಕಾಂಗ್ರೆಸ್ ರಾಜ್ಯ ಕಾರ್ಯದರ್ಶಿ ಶಶಾಂಕ್ ಗೋಪಾಲಸ್ವಾಮಿ ತಿಳಿಸಿದರು.




ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಜಿಲ್ಲಾ ಯುವ ಕಾಂಗ್ರೆಸ್ ಚುನಾಯಿತ ಪದಾಧಿಕಾರಿಗಳ ಪದಗ್ರಹಣ ಸಮಾರಂಭವೂ ಇದೇ ಸಂದರ್ಭದಲ್ಲಿ ನಡೆಯಲಿದೆ. ಬೆಳಿಗ್ಗೆ 11 ಗಂಟೆಗೆ ವೇದಿಕೆ ಕಾರ್ಯಕ್ರಮ ಪ್ರಾರಂಭವಾಗಲಿದೆ ಎಂದರು.

ಕಂದಾಯ ಸಚಿವ ಕೃಷ್ಣ ಬೈರೇಗೌಡ, ಮಾಜಿ ಸಂಸದ ಡಿ.ಕೆ. ಸುರೇಶ್, ರಾಷ್ಟ್ರೀಯ ಯುವ ಕಾಂಗ್ರೆಸ್ ಮಾಜಿ ಅಧ್ಯಕ್ಷ ಬಿ.ವಿ. ಶ್ರೀನಿವಾಸ್, ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಗೌಡ, ರಿಜ್ವಾನ್ ಹರ್ಷದ್, ಸಂಸದ ಶ್ರೇಯಸ್ ಪಟೇಲ್, ಅರಸೀಕೆರೆ ಶಾಸಕ ಕೆ.ಎಂ. ಶಿವಲಿಂಗೇಗೌಡ ಸೇರಿ ಪಕ್ಷದ ಇತರ ನಾಯಕರು ಪಾಲ್ಗೊಳ್ಳಲಿದ್ದಾರೆ ಎಂದರು.

ಜಿಲ್ಲೆಯ ವಿವಿಧ ಭಾಗದ ಸುಮಾರು 8 ಸಾವಿರ ಕಾಂಗ್ರೆಸ್ ಕಾರ್ಯಕರ್ತರು ಯುವ ಪರ್ವ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಪಟ್ಟಣದ ಮಖಾನ್ ರಸ್ತೆಯಿಂದ ಪ್ರಮುಖ ಬೀದಿಗಳಲ್ಲಿ ಬೈಕ್ ರ್ಯಾಲಿ ನಡೆಸಲಾಗುವುದು ಎಂದರು.

ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ರಂಜಿತ್ ಗೊರೂರು, ಸದಸ್ಯರಾದ ವೇಣುಗೋಪಾಲ್, ನವೀನ್, ಸಾಗರ್, ಸುರಾಗ್ ಮೂರ್ತಿ ಇದ್ದರು.

# ವಿರೂಪಾಕ್ಷಪುರ ಮೇಲ್ಸೇತುವೆ ಗೋಡೆ ಬಿರುಕು

## ಯಥೇಚ್ಛ ಪ್ರಮಾಣದಲ್ಲಿ ನೀರು ಪೋಲು | ಕೃಷಿ ಜಮೀನು ಜಲಾವೃತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ವಿರೂಪಾಕ್ಷಪುರ ಗ್ರಾಮದ ಬಳಿ ಹಾದು ಹೋಗಿರುವ ನುಗ್ಗೇಹಳ್ಳಿ ಏತ ನೀರಾವರಿ ಯೋಜನೆಯ ಮೇಲ್ಸೇತುವೆ ಗೋಡೆಯಲ್ಲಿ ಬಿರುಕು ಬಿಟ್ಟಿದ್ದು ಯತೇಚ್ಛ ಪ್ರಮಾಣದಲ್ಲಿ ನೀರು ಸೋರುತ್ತಿರುವುದು ಮಾತ್ರವಲ್ಲದೆ ಅಪಾಯಕ್ಕೆ ಆಹ್ವಾನ ನೀಡುತ್ತಿದೆ.

ಅದರಿಂದ ತಾಲ್ಲೂಕಿನ ನುಗ್ಗೇಹಳ್ಳಿ ಕೆರೆಗೆ ನೀರು ಹರಿಯಲು ತೊಂದರೆಯಾಗುತ್ತಿದೆ. ತಡೆಗೋಡೆಯಿಂದ ಧುಮ್ಮಿಕ್ಕುತ್ತಿರುವ ನೀರಿನಿಂದ ರೈತರ ಕೃಷಿ ಜಮೀನು ಜಲಾವೃತಗೊಂಡು ಬೆಳೆ ಹಾಳಾಗುತ್ತಿದೆ ಎಂದು ಸುತ್ತಲಿನ ರೈತರು ಆರೋಪಿಸಿದ್ದಾರೆ.

ಏತ ನೀರಾವರಿ ಯೋಜನೆಯು ಈ ಭಾಗದ ರೈತರ ಕನಸಾಗಿದ್ದು 2020ರಲ್ಲಿ ಕಾಮಗಾರಿ ಪೂರ್ಣಗೊಂಡು ನೀರೆತ್ತುವ ಕಾರ್ಯಕ್ಕೆ ಚಾಲನೆ ದೊರೆತಿತ್ತು. ಅಂದಿನಿಂದಲೂ ಈ ಏತ ನೀರಾವರಿ ಯೋಜನೆಯಡಿ ವ್ಯಾಪ್ತಿಯ ಕಲ್ಕೆರೆ, ದೇವಿಗೆರೆ, ಚೌಡೇನಹಳ್ಳಿ, ಪಿ.ದಾಸಪುರ, ಜಂಬೂರು, ಅಮಾನಿಕೆರೆ ಹಾಗೂ ನುಗ್ಗೇಹಳ್ಳಿ ಕೆರೆಗೆ ನೀರು ತುಂಬಿಸಲಾಗುತ್ತಿದೆ.

ಆದರೆ ಯೋಜನೆಯಲ್ಲಿ ನುಗ್ಗೇಹಳ್ಳಿ ಗ್ರಾಮದ ಹಿರೇಕೆರೆ ಕೆರೆಯು ವ್ಯಾಪ್ತಿಯ ಕೊನೆ ಭಾಗದಲ್ಲಿ ಬರಲಿದ್ದು ಪ್ರತಿ ವರ್ಷವೂ ಏನಾದರೊಂದು ಸಮಸ್ಯೆಗಳಿಂದ ಕೆರೆಗೆ ಸಮರ್ಪಕವಾಗಿ ನೀರು ಹರಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಕಳೆದ 2-3 ವರ್ಷಗಳಿಂದ ನುಗ್ಗೇಹಳ್ಳಿ ಹಿರೇಕೆರೆಯು ಪೂರ್ಣ ಪ್ರಮಾಣದಲ್ಲಿ ತುಂಬುತ್ತಿಲ್ಲ ಎಂಬುದು ಸ್ಥಳೀಯರ ಆರೋಪವಾಗಿದೆ.

ಏತನೀರಾವರಿ ಯೋಜನೆ ವ್ಯಾಪ್ತಿಯ ವಿರೂಪಾಕ್ಷಪುರ ಗ್ರಾಮದ ಬಳಿ ಹಾದು ಹೋಗಿರುವ ನೀರಿನ ಸೇತುವೆ ತಡೆಗೋಡೆಯು ಬಹುತೇಕ ಕಡೆಗಳಲ್ಲಿ ಬಿರುಕು ಬಿಟ್ಟಿದ್ದು ಅದರಿಂದ ಹೆಚ್ಚಿನ ಪ್ರಮಾಣದಲ್ಲಿ ನೀರು ಸೋರಿಕೆಯಾಗುತ್ತಿದೆ. ಭಾಗದ 30ಕ್ಕೂ ಹೆಚ್ಚು ರೈತರ ತೋಟಗಳಿಗೆ ನೀರು ಹರಿಯುತ್ತಿದ್ದು ಶೀತಗೊಂಡು ತೆಂಗಿನ ಮರಗಳು ನಾಶವಾಗುವ ಹಂತ ತಲುಪಿವೆ ಎಂಬುದು ಈ ಭಾಗದ ರೈತರ ಅಸಮಾಧಾನಕ್ಕೆ ಕಾರಣವಾಗಿದೆ.




> ಈಗಾಗಲೇ ದುರಸ್ತಿ ಕಾರ್ಯ ಕೈಗೊಳ್ಳಲು ಸೂಚನೆ ನೀಡಲಾಗಿದ್ದು ಸದ್ಯದಲ್ಲೇ ಕಾಮಗಾರಿ ಆರಂಭಿಸಿ ಬಿರುಕು ಬಿಟ್ಟಿರುವ ಜಾಗವನ್ನು ದುರಸ್ತಿಗೊಳಿಸಿದ ನಂತರ ನುಗ್ಗೇಹಳ್ಳಿ ಕೆರೆಗೆ ನೀರು ಹರಿಸಲು ಕ್ರಮ ಕೈಗೊಳ್ಳಲಾಗುವುದು. ಅಲ್ಲದೆ ಮುಂದಿನ ದಿನಗಳಲ್ಲಿ ಸಮಸ್ಯೆಯಾಗದಂತೆ ಜಾಗೃತಿ ವಹಿಸಲಾಗುವುದು.
>
> **- ಮಂಜುನಾಥ್,**
> **ಎಇ, ಕಾವೇರಿ ನೀರಾವರಿ ನಿಗಮ**

### ಕಳಪೆ ಕಾಮಗಾರಿ ಕಾರಣ

ಕಳೆದ 3 ವರ್ಷಗಳಿಂದ ಈ ಸಮಸ್ಯೆ ಕಾಣಿಸಿಕೊಂಡಿದ್ದು ಹಂತ ಹಂತವಾಗಿ ಬಿರುಕಿನ ಪ್ರಮಾಣ ತೀವ್ರಗೊಂಡಿದೆ. ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳಿಗೆ ಹಲವು ಬಾರಿ ಸಮಸ್ಯೆಯ ಬಗ್ಗೆ ದೂರು ನೀಡಿದ್ದರೂ ಸಹ ಇದೂವರೆಗೆ ಪ್ರಯೋಜನವಾಗಿಲ್ಲ. ಕಳಪೆ ಕಾಮಗಾರಿಯೇ ಅವಾಂತರಕ್ಕೆ ಕಾರಣ ಎಂದು ಆರೋಪಿಸಲಾಗಿದೆ.

ಹೋಬಳಿ ರೈತ ಸಂಘದ ಅಧ್ಯಕ್ಷ ಸೋಮಶೇಖರಯ್ಯ ಮಾತನಾಡಿ, ಅನೇಕ ವರ್ಷಗಳಿಂದ ಸಮಸ್ಯೆ ಇದೆ. ಕಳೆದ ವರ್ಷದಿಂದ ಮೇಲ್ಸೇತುವೆಯ ತಡೆಗೋಡೆ ಬೆಚ್ಚು ಬಿರುಕು ಬಿಟ್ಟಿದ್ದು ಹೆಚ್ಚಿನ ಪ್ರಮಾಣದಲ್ಲಿ ನೀರು ಪೋಲಾಗಿ ಹರಿಯುತ್ತಿದೆ. ಇದರಿಂದ ಈ ಭಾಗದ ರೈತರ ಜಮೀನುಗಳಿಗೆ ನೀರು ನುಗ್ಗುವುದರಿಂದ ಹೆಚ್ಚು ನಷ್ಟವಾಗುತ್ತಿದೆ. ಇಲಾಖೆಯಿಂದ ಈ ಪ್ರದೇಶವನ್ನು ಮುಳುಗಡೆ ಪ್ರದೇಶವೆಂದು ಘೋಷಣೆ ಮಾಡಿ ರೈತರಿಗೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

> ನಿತ್ಯ ಸೇತುವೆ ಬಿರುಕಿನ ಪ್ರಮಾಣ ಹೆಚ್ಚುತ್ತಿದ್ದು ನೀರು ಪೋಲಾಗುತ್ತಿದೆ. ಇದರಿಂದ ಮುಂಬರುವ ದಿನಗಳಲ್ಲಿ ನುಗ್ಗೇಹಳ್ಳಿ ಹಿರೇಕೆರೆಗೆ ನೀರು ಹರಿಸಲು ಸಾಧ್ಯವಾಗುವುದಿಲ್ಲ. ಈ ಬಗ್ಗೆ ಕ್ಷೇತ್ರದ ಶಾಸಕರು ಶೀಘ್ರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆಯೊಂದಿಗೆ ಸಮಸ್ಯೆ ಬಗೆಹರಿಸುವಲ್ಲಿ ಕ್ರಮ ಕೈಗೊಳ್ಳಬೇಕು.
>
> **- ರಾಮಚಂದ್ರ, ಅಧ್ಯಕ್ಷ, ತಾಲ್ಲೂಕು ರೈತ ಸಂಘ**



> ಸ್ಥಳಕ್ಕೆ ಭೇಟಿ ನೀಡಿ ದುರಸ್ತಿ ಮಾಡುವಂತೆ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳಿಗೆ ಈಗಾಗಲೇ ಸೂಚಿಸಲಾಗಿದೆ. ಕೆರೆಗಳಿಗೆ ನೀರು ತುಂಬಿಸುವಲ್ಲಿ ಯಾವುದೇ ಸಮಸ್ಯೆಯಾಗಬಾರದು. ಮೇಲ್ಸೇತುವೆಯ ತಡೆಗೋಡೆಯನ್ನು ಜರೂರಾಗಿ ದುರಸ್ತಿಗೊಳಿಸಿ ನೀರು ಹರಿಸಲು ಕ್ರಮ ಕೈಗೊಳ್ಳಾಗುವುದು.
>
> **- ಸಿ.ಎನ್. ಬಾಲಕೃಷ್ಣ, ಶಾಸಕ**

## ಅಸ್ವಸ್ಥರ ಆರೋಗ್ಯ ವಿಚಾರಿಸಿದ ಜಿಲ್ಲಾಧಿಕಾರಿ

ಹಾಸನ: ಅರಸೀಕೆರೆ ತಾಲ್ಲೂಕಿನ ಮಾಲೆಕಲ್‌ತಿರುಪತಿ ಗ್ರಾಮದಲ್ಲಿ ಇತ್ತೀಚೆಗೆ ಜರುಗಿದ ಶ್ರೀ ಲಕ್ಷ್ಮಿ ವೆಂಕಟರಮಣ ಸ್ವಾಮಿ ತೆಪ್ಪೋತ್ಸವ ಬಳಿಕ ವಾಸವಿ ಛತ್ರದಲ್ಲಿ ಪ್ರಸಾದ ಸ್ವೀಕರಿಸಿ ಅಸ್ವಸ್ಥಗೊಂಡಿದ್ದ ಕಾರೆಹಳ್ಳಿ ಗ್ರಾಮಸ್ಥರ ಮನೆಗೆ ಗುರುವಾರ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಭೇಟಿ ನೀಡಿ ಯೋಗ ಕ್ಷೇಮ ವಿಚಾರಿಸಿದರು. ನಂತರ ಲಕ್ಷ್ಮಿ ವೆಂಕಟರಮಣ ಸ್ವಾಮಿ ದೇವಸ್ಥಾನಕ್ಕೂ ಭೇಟಿ ನೀಡಿ ಮಾಹಿತಿ ಪಡೆದುಕೊಂಡರು. ಉಪವಿಭಾಗಾಧಿಕಾರಿ ಮಾರುತಿ, ತಹಶೀಲ್ದಾರ್ ಸಂತೋಷ್ ಮತ್ತಿತರರು ಹಾಜರಿದ್ದರು.



## ಸೆಸ್ಕ್‌ನಿಂದ ಸಹಾಯವಾಣಿ ಆರಂಭ

ಹಾಸನ: ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಜಿಲ್ಲಾ ವ್ಯಾಪ್ತಿಯಲ್ಲಿಗ್ರಾಹಕರು ದೂರುಗಳನ್ನು ದಾಖಲಿಸಲು ಮತ್ತು ವಿದ್ಯುಚ್ಛಕ್ತಿಗೆ ಸಂಬಂಧಪಟ್ಟ ಸಮಸ್ಯೆಗಳನ್ನು ಸಕಾಲದಲ್ಲಿ ಬಗೆಹರಿಸಿಕೊಳ್ಳಲು ಜಿಲ್ಲಾ ಮಟ್ಟದಲ್ಲಿ ವೃತ್ತ ವ್ಯಾಪ್ತಿಯ ಗ್ರಾಹಕರ ದೂರು ನಿವಾರಣಾ ಕೇಂದ್ರಕ್ಕೆ ಟೋಲ್ ಫ್ರೀ ನಂಬರ್-1800-599-0065 ಸಂಖ್ಯೆಯನ್ನು ಕ್ರಿಯಾಶೀಲಗೊಳಿಸಲಾಗಿದೆ ಎಂದು ಚಾವಿಸನಿನಿ ಹಾಸನದ ಕಾರ್ಯ ಮತ್ತು ಪಾಲನಾ ವೃತ್ತದ ಅಧೀಕ್ಷಕ ಎಂಜಿನಿಯರ್ ತಿಳಿಸಿದ್ದಾರೆ.

# ಮುಂದಿನ ಮೂರುವರೆ ತಿಂಗಳು ನಾಲೆಗೆ ನೀರು

## ಹೇಮಾವತಿ ಜಲಾಶಯ ಯೋಜನೆ ನೀರಾವರಿ ಸಲಹಾ ಸಮಿತಿ ತೀರ್ಮಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಜೀವನಾಡಿ ಹೇಮಾವತಿ ಅಣೆಕಟ್ಟೆ ವ್ಯಾಪ್ತಿಯ ಎಡದಂಡೆ, ಬಲದಂಡೆ ಹಾಗೂ ಬಲಮೇಲ್ದಂಡೆ ನಾಲೆಗಳ ಮೂಲಕ ಮುಂದಿನ ಮೂರುವರೆ ತಿಂಗಳ ಕಾಲ ನೀರು ಹರಿಸಲಾಗುತ್ತದೆ.

ಹೇಮಾವತಿ ಜಲಾಶಯ ಯೋಜನೆಯ ನೀರಾವರಿ ಸಲಹಾ ಸಮಿತಿಯ ತೀರ್ಮಾನದಂತೆ ಹೇಮಾವತಿ ಜಲಾಶಯದ ನೀರಿನ ಮಟ್ಟ ಹಾಗೂ ಒಳಹರಿವು ಆಧರಿಸಿ ನದಿ ಮತ್ತು ಯೋಜನಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ನಾಲೆಗಳಿಂದ ಜನ-ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ, ಕೆರೆ-ಕಟ್ಟೆಗಳನ್ನು ತುಂಬಿಸಲು ಕ್ರಮ ಕೈಗೊಂಡು ನಾಲೆಗಳ ಮೂಲಕ ನೀರು ಹರಿಸಲಾಗುತ್ತಿದೆ.

### ನೀರು ಬಿಡುವ ನಾಲೆಗಳ ವಿವರ

ಹೇಮಾವತಿ ಎಡದಂಡೆ ನಾಲೆ ಪ್ರಾರಂಭದಿಂದ 212ನೇ ಕಿ.ಮೀ. ವರೆಗೆ ಒಟ್ಟು 78915 ಹೆಕ್ಟೇರ್ ಅರೆಖುಷ್ಕಿ ಪ್ರದೇಶಕ್ಕೆ ನೀರು ಹರಿಸಲಾಗುತ್ತದೆ. ಹೇಮಾವತಿ ಬಲದಂಡೆ ನಾಲೆ ಪ್ರಾರಂಭದಿಂದ 91ನೇ ಕಿ.ಮೀ. ವರೆಗೆ ಭತ್ತ 2833 ಹೆಕ್ಟೇರ್, ಅರೆಖುಷ್ಕಿ 5261 ಹೆಕ್ಟೇರ್ ಒಟ್ಟು 8094 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೊರಕಲಿದೆ.

ಹೇಮಾವತಿ ಬಲಮೇಲ್ದಂಡೆ ನಾಲೆ ಪ್ರಾರಂಭದಿಂದ 97ನೇ ಕಿ.ಮೀ.ವರೆಗೆ, ಭತ್ತ 2428 ಹೆಕ್ಟೇರ್,, ಅರೆಖುಷ್ಕಿ 20234 ಹೆಕ್ಟೇರ್, ಒಟ್ಟು 22662 ಹೆಕ್ಟೇರ್ ಕೃಷಿ ಭೂಮಿಗೆ ನೀರು ಲಭ್ಯವಾಗಲಿದೆ. ತುಮಕೂರು ಮತ್ತು ನಾಗಮಂಗಲ ಶಾಖಾ ನಾಲೆಗಳಿಗೆ ಪ್ರತ್ಯೇಕವಾಗಿದ ಆದೇಶವನ್ನು ಹೊರಡಿಸಲಾಗುತ್ತದೆ. ಸದ್ಯ ಒಟ್ಟು 5261 ಹೆಕ್ಟೇರ್



ಭತ್ತದ ಬೆಳೆಗೆ ಹಾಗೂ 1,04,410 ಹೆಕ್ಟೇರ್ ಅರೆಖುಷ್ಕಿ ಸೇರಿ 1,09,671 ಹೆಕ್ಟೇರ್ ಪ್ರದೇಶಕ್ಕೆ ಹೇಮಾವತಿ ಅಣೆಕಟ್ಟೆ ನೀರು ಲಭ್ಯವಾಗಲಿದೆ.

### ನಿಗದಿತ ಬೆಳೆಗೆ ಮಾತ್ರ ನೀರು

ಜಲಾಶಯದಲ್ಲಿರುವ ನೀರಿನ ಶೇಖರಣೆ ಮತ್ತು ಮಳೆಯನ್ನು ಆಧರಿಸಿ, ಜಲಾಶಯಕ್ಕೆ ಹರಿದು ಬರಬಹುದಾದ ನೀರಿನ ಪ್ರಮಾಣವನ್ನು ಅಂದಾಜು ಮಾಡಿ ನೀರಿನ ಪ್ರಮಾಣವನ್ನು ನಿಗದಿಗೊಳಿಸಲಾಗಿದೆ. ಒಂದು ವೇಳೆ ನೀರಿನ ನಿಯಂತ್ರಣ ಅಥವಾ ನೈಸರ್ಗಿಕ ವ್ಯತ್ಯಾಸದಿಂದ ನೀರಿನ ಕೊರತೆ ಉಂಟಾಗಿ ಬೆಳೆ ನಷ್ಟವಾದಲ್ಲಿ ಇಲಾಖೆಯವರು ಜವಾಬ್ದಾರರಲ್ಲ, ರೈತರಿಗೆ ಪರಿಹಾರ ಕೇಳುವ ಹಕ್ಕಲ್ಲ. ಆದ್ದರಿಂದ ಲಭ್ಯವಾದ ನೀರನ್ನು ಅಗತ್ಯವಿದ್ದಷ್ಟು ಮಾತ್ರ ಬಳಸಿಕೊಳ್ಳುವಂತೆ

**ಜಲಾಶಯ ನಾಲೆಗಳ ಅಚ್ಚುಕಟ್ಟು ವಿವರ**

| ನಾಲೆಗಳು | ಭತ್ತ ಬೆಳೆಯುವ ಪ್ರದೇಶ |
|---|---|
| ಚಂಗರವಳ್ಳಿ ಕಾಲುವೆ | 328 ಹೆಕ್ಟೇರ್ |
| ಶ್ರೀರಾಮದೇವರ ದಕ್ಷಿಣ ನಾಲೆ | 892 ಹೆಕ್ಟೇರ್ |
| ಶ್ರೀರಾಮದೇವರ ಉತ್ತರ ನಾಲೆ | 3830 ಹೆಕ್ಟೇರ್ |
| ಹೇಮಗಿರಿ ನಾಲೆ | 1609 ಹೆಕ್ಟೇರ್ |
| ಅಕ್ಕಿಹೆಬ್ಬಾಳು ನಾಲೆ | 150 ಹೆಕ್ಟೇರ್ |
| ಮಂದಗೆರೆ ಎಡದಂಡೆ ನಾಲೆ | 1938 ಹೆಕ್ಟೇರ್ |
| ಮಂದಗೆರೆ ಬಲದಂಡೆ ನಾಲೆ | 4706 ಹೆಕ್ಟೇರ್ |
| ಒಟ್ಟು | 13453 ಹೆಕ್ಟೇರ್ |

ಸೂಚಿಸಲಾಗಿದೆ. ನೀರಾವರಿಗೆ ಸಂಬಂಧಪಟ್ಟ ವಿತರಣಾ ನಾಲಾವಾರು, ಗ್ರಾಮವಾರು, ಸರ್ವೆ ನಂಬರ್ ಮುಂತಾದ ಮಾಹಿತಿಗೆ ಸಂಬಂಧಿಸಿದಂತೆ ವಿಭಾಗ ಹಾಗು ಉಪ ವಿಭಾಗ ಕಚೇರಿಗಳಲ್ಲಿ ಮಾಹಿತಿ ಪಡೆಯಬಹುದು ಎಂದು ಸಲಹೆ ನೀಡಲಾಗಿದೆ.

ರೈತರು ನೀರಿನ ಲಭ್ಯತೆ ಆದರಿಸಿ ಕೃಷಿ ಅಧಿಕಾರಿಗಳ ಸಲಹೆ ಪಡೆದು, ಸೂಕ್ತ ಬೆಳೆಗಳನ್ನು ಅಳವಡಿಸಿ ಸದುಪಯೋಗ ಪಡೆಯಬೇಕು. ನಿಯಮಾಸಾರವಾಗಿ ನಿಗದಿತ ಬೆಳೆಯನ್ನೇ ಬೆಳೆಯಬೇಕು. ವಿರುದ್ಧವಾದ ಬೇರೆ ಬೆಳೆ ಬೆಳೆದ ಪಕ್ಷದಲ್ಲಿ ಕರ್ನಾಟಕ ನೀರಾವರಿ ಕಾಯ್ದೆ ಹಾಗೂ ಚಾಲ್ತಿಯಲ್ಲಿರುವ ನಿಯಮಾವಳಿಗಳ ಪ್ರಕಾರ ದಂಡ ವಿಧಿಸಲಾಗುವುದು ಮತ್ತು ಆಗಬಹುದಾದ ನೀರಿನ ಕೊರತೆ ಮತ್ತು ಬೆಳೆ ನಷ್ಟಕ್ಕೆ ರೈತರೇ ಜವಾಬ್ದಾರಿ ಹೊರಬೇಕಾಗುತ್ತದೆ ಎಂದು ಎಚ್ಚರಿಸಲಾಗಿದೆ.

# ಷರತ್ತು ಸಡಿಲಿಸಲು ಪ್ರಭಾಕರ್‌ಗೆ ಕೆಯುಡಬ್ಲ್ಯೂಜೆ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆಯಲ್ಲಿನ ಕಠಿಣ ಷರತ್ತಗಳನ್ನು ಸಡಿಲಿಸಿ, ಸರಳೀಕರಣ ಮಾಡಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಅವರಿಗೆ ಮನವಿ ಸಲ್ಲಿಸಿತು.

ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ನೇತೃತ್ವದದಲ್ಲಿ ವಿಧಾನಸೌಧದಲ್ಲಿ ಭೇಟಿ ಮಾಡಿದ ನಿಯೋಗ, ಮಾಧ್ಯಮ ಮಾನ್ಯತೆ ಪಡೆದ ಪತ್ರಕರ್ತರು ಮತ್ತು ಅವರ ಕುಟುಂಬಕ್ಕೆ ಈ ಯೋಜನೆಯನ್ನು ಸೀಮಿತ ಮಾಡಿರುವುದರಿಂದ ಹೆಚ್ಚು ಪತ್ರಕರ್ತರು ಯೋಜನೆಯಿಂದ ವಂಚಿತರಾಗುತ್ತಾರೆ ಎನ್ನುವ ವಿಷಯವನ್ನು ಅವರ ಗಮನಕ್ಕೆ ತಂದಿತು.

ವಾರ್ತಾ ಇಲಾಖೆಯಲ್ಲಿ ಮಾಧ್ಯಮ ಪಟ್ಟಿಯಲ್ಲಿರುವ ಪತ್ರಿಕೆಗಳು ಮತ್ತು ಸುದ್ದಿಮಾಧ್ಯಮಗಳಲ್ಲಿ ಕೆಲಸ ಮಾಡುವ ಎಲ್ಲಾ ಪತ್ರಕರ್ತರಿಗೂ ಯೋಜನೆಯನ್ನು ವಿಸ್ತಾರ ಮಾಡಬೇಕು ಎನ್ನುವ ಕೆಯುಡಬ್ಲ್ಯೂಜೆ ಮನವಿಗೆ ಕೆ.ವಿ. ಪ್ರಭಾಕರ್ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಪರಿಶೀಲಿಸುವ ಭರವಸೆ ನೀಡಿದ್ದಾರೆ.

ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆಯನ್ನು ಪತ್ರಿಕಾ ದಿನಾಚರಣೆ ಸಂದರ್ಭದಲ್ಲಿಯೇ ಜಾರಿಗೆ ನೀಡಿರುವುದು ಸ್ವಾಗತಾರ್ಹವಾಗಿದ್ದು, ಅದಕ್ಕಾಗಿ ಪ್ರಭಾಕರ್ ಅವರಿಗೆ ನಿಯೋಗ ಅಭಿನಂದನೆ ಸಲ್ಲಿಸಿತು.



ತುಮಕೂರಿನಲ್ಲಿ ನಡೆದ 39ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಪತ್ರಕರ್ತರಿಗೆ ಉಚಿತ ಆರೋಗ್ಯ ಯೋಜನೆಯನ್ನು ಜಾರಿಗೆ ತರಬೇಕು ಎನ್ನುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲೂಜೆ) ಹಕ್ಕೊತ್ತಾಯಕ್ಕೆ ಸ್ಪಂದಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅದೇ ವೇದಿಕೆಯಲ್ಲಿ ಯೋಜನೆ ಜಾರಿಗೆ ತರುವುದಾಗಿ ಘೋಷಿಸಿದ್ದು ಅಷ್ಟೇ ಅಲ್ಲ, ಬಜೆಟ್‌ನಲ್ಲಿಯೂ ಪ್ರಕಟಿಸಿ ನುಡಿದಂತೆ ನಡೆದಿದ್ದರು. ಈ ನಿಟ್ಟಿನಲ್ಲಿ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರ ಪಾತ್ರವೂ ಪ್ರಾಮುಖ್ಯವಾಗಿತ್ತು ಎನ್ನುವುದನ್ನು ಕೆಯುಡಬ್ಲ್ಯೂಜೆ ಮನವಿಯಲ್ಲಿ ಸ್ಮರಿಸಿದೆ.

ನಿಯೋಗದಲ್ಲಿ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಎನ್. ರವಿಕುಮಾರ್, ಜಿ. ಮುಮ್ತಾಜ್ ಅಲೀಂ ಇದ್ದರು.

# ಕೊಳ್ಳೆಗಾಲದ ಕೈಲಾಸಮೂರ್ತಿ ಕಲಾ ಸೇವೆ ಅಗಾಧ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಕನ್ನಡ ಜಾನಪದ ಸಾಹಿತ್ಯ ಕಲೆ ಸಂಸ್ಕೃತಿ ಪರಂಪರೆಗೆ ಚಾಮರಾಜನಗರ ಜಿಲ್ಲೆಯ ಕೊಡುಗೆ ಸಾಕಷ್ಟಿದೆ. ಪರಂಪರಾಗತವಾಗಿ ಬಂದ ವೈವಿಧ್ಯ ಜನಪದ ಕಲೆಗಳಲ್ಲಿ ತಂಬೂರಿ ಪದವನ್ನು ಕಿರಿಯ ವಯಸ್ಸಿಗೆ ಮೈಗೂಡಿಸಿಕೊಂಡ ಕಲಾವಿದ ಕೊಳ್ಳೆಗಾಲ ತಾಲ್ಲೂ ಸಿದ್ದಯ್ಯನಪುರದ ಎಂ. ಕೈಲಾಸಮೂರ್ತಿ.

ಮಂಟೇಸ್ವಾಮಿ ಜನಪದ ಕಾವ್ಯ ಕೃತಿಯ ಸಂಪಾದಕಿ ಮಳವಳ್ಳಿ ಪಿ.ನಾಗರತ್ನಮ್ಮ ಇವರನ್ನು ನನಗೆ ಪರಿಚಯಿಸಿದರು. ತಮ್ಮೂರಿನ ಮನೆಯಲ್ಲೇ ಜನಪದ ಕಥೆ ಕಾವ್ಯ ಬೀಸು ಕಂಸಾಳೆ ಕೇಂದ್ರ ಪ್ರಾರಂಭಿಸಿ ಕಲಿಯುವ ಕಿರಿಯರಿಗೂ ಕಲಿಸಿಕೊಡುವ ಮೂಲಕ ಕಲೆ ಪ್ರಸರಣದ ರಾಯಭಾರಿಯಾಗಿಯೂ ಕರ್ತವ್ಯ ನಿರತರು. ಇವರ 30 ಶಿಷ್ಯರು ಸ್ವಂತ ಹಾಡುಗಾರಿಕೆ ರೂಢಿಸಿಕೊಂಡಿದ್ದಾರೆ. ಇವರ ತಂಡ ರಾಜ್ಯದ ವಿವಿಧೆಡೆ ತೆರಳಿ ಕಲಾ ಪ್ರದರ್ಶನ ನೀಡುತ್ತಿವೆ. ಮಲ್ಲಿಕಾರ್ಜುನ ಲಕ್ಷ್ಮಿ ದಂಪತಿ ಪುತ್ರರಾದ ಇವರು 1988ರ ಜೂನ್ 1 ರಂದು ಜನಿಸಿದರು. 7ನೇ ತರಗತಿಗೆ ಶಿಕ್ಷಣಕ್ಕೆ ಶರಣು ಹೇಳಿದರು. ಇವರ ಕುಟುಂಬ ಗುರು ಮಕ್ಕಳ ಪರಂಪರೆ ತತ್ವಪದ ಹಾಡುಗಾರಿಕೆಗೆ ಸೇರಿದವರಾಗಿ




ದೊಡ್ಡಪ್ಪ ಮಹದೇವಯ್ಯ ದಮ್ಮಡಿ ಬಾರಿಸುತ್ತಿದ್ದರು. ತಂದೆ ಮಲ್ಲಿಕಾರ್ಜುನ ಅವರ ಜೊತೆ ಸೊಲ್ಲಿಕ್ಕುತ್ತಿದ್ದರು. ತಂದೆ ಸತ್ತವರ ಮನೆಗಳಿಗೆ ಹೋಗಿ ಭಜನೆ ಮಾಡುತ್ತಿದ್ದರು. ನಾನು ಅವರ ಜತೆಗೆ ಸೊಲ್ಲಿಕುತ್ತಿದ್ದೆ. ನಂತರ ನಾನೇ ಪರಿಕರ ಬಳಸಿ ಹಾಡುವುದನ್ನು ಕಲಿತೆ ಎನ್ನುತ್ತಾರೆ. ಕುರಿ ಮೇಯಿಸಲು ಹೊಲಕ್ಕೆ ಹೋದಾಗ ತಮ್ಮೂರಿನ ಬಸವಮ್ಮ ಇವರು ಮಂಟೇಸ್ವಾಮಿ, ಮಹದೇಶ್ವರ, ಬಿಳಿಗಿರಿ ರಂಗನಾಥ, ನಂಜುಂಡೇಶ್ವರ, ಚಾಮುಂಡೇಶ್ವರಿ ಕಥೆ ಹಾಡುತ್ತಿದ್ದರು. ಇದನ್ನು ಕೇಳಿ ಕೈಲಾಸಮೂರ್ತಿ ಪ್ರಭಾವಿತರಾದರು. ಈಗ ಇವರೇ ಮಂಟೇಸ್ವಾಮಿ ಕಾವ್ಯ, ಸಿದ್ಧಪ್ಪಾಜಿ ಕಥೆ, ಮೈಲಾಳ ರಾಮನ ಕಥೆ, ನಂಜುಂಡೇಶ್ವರ ಮಲೆ ಮಹದೇಶ್ವರರ ಕಾವ್ಯಗಳನ್ನು ಹಾಡುವಲ್ಲಿ ಹೆಸರುವಾಸಿ.

ಮಂಟೇಸ್ವಾಮಿ ಕಾವ್ಯದ ಮೂಲ ಗಾಯನ ಶೈಲಿಯನ್ನೇ ಅನುಸರಿಸುತ್ತಾರೆ. ಮಳವಳ್ಳಿ ರಾಜೇಬೊಪ್ಪೇಗೌಡನ ಮಠದಲ್ಲಿ ಹಂಪಿ ವಿಶ್ವವಿದ್ಯಾಲಯ ನಡೆಸಿದ ಶ್ರೀ ಮಂಟೇಸ್ವಾಮಿ ಕಥೆ ಕಾವ್ಯ ದಮ್ಮಡಿ ತಾಳ ಕಲಿಕಾ ತರಬೇತಿಯಲ್ಲಿ ಭಾಗವಹಿಸಿ ಪೂರಿಗಾಲಿ ಮಹದೇವಣ್ಣರಿಂದ ಇನ್ನು ಹೆಚ್ಚಿನದಾಗಿ ಕಲಿತಿದ್ದಾರೆ. ಮಲೆಮಹದೇಶ್ವರ ಬೆಟ್ಟದಲ್ಲಿ 15 ವರ್ಷ ದೊಡ್ಡಭೂವಳ್ಳಿ ಮಹೇಶ್ ಹಾಗೂ ಇತರರೊಂದಿಗೆ ವೇದಿಕೆಗಳಲ್ಲಿ ಹಾಡಿದ್ದಾರೆ. 2003ರಿಂದ ತಮ್ಮದೇ ತಂಡ ಕಟ್ಟಿಕೊಂಡು ನಾಡಿನಾದ್ಯಂತ ತಿರುಗಿದ್ದಾರೆ. ರಾಜ್ಯ ಮಟ್ಟದ ಯುವ ಜನ ಮೇಳ ಪುತ್ತೂರು, 2013ರಲ್ಲಿ ಅಳ್ವಾಸ್ ವಿಶ್ವ ನುಡಿಸಿರಿ ವಿರಾಸಾತ್ ಮೂಡುಬಿದರೆ ಉತ್ಸವದಲ್ಲಿ ಭಾಗವಹಿಸಿದ್ದಾರೆ. ಮುಂಬೈ, ಚೆನ್ನೈ, ಪುದುಚೇರಿ, ಕೇರಳ, ಆಂಧ್ರಪ್ರದೇಶ, ತೆಲಂಗಾಣ, ದೆಹಲಿ ಇಲ್ಲಿನ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದಾರೆ. ಕರ್ನಾಟಕ ಅನೇಕ ಕಡೆಗಳಲ್ಲಿ ಇವರ ಕಂಚಿನ ಕಂಠ, ತನ್ಮಯತೆಯಿಂದ ನುಡಿಸುವ ತಂಬೂರಿಯ ನಿನಾದ ಅನುರಣಿಸಿವೆ. ಚಿಕ್ಕಲ್ಲೂರು ಜಾತ್ರೆ, ಕಪ್ಪಡಿ, ಮಲೆ ಮಹದೇಶ್ವರ ಬೆಟ್ಟದ ಜಾತ್ರೆ, ಸುತ್ತೂರು ಜಾತ್ರೆಗಳಲ್ಲಿ ಸಿದ್ದಪ್ಪಾಜಿ, ಮಂಟೇಸ್ವಾಮಿ, ಮಲೆಮಹದೇಶ್ವರ ಗೀತೆಗಳನ್ನು ಹಾಡಿದ್ದಾರೆ. ತಂಬೂರಿ ಮತ್ತು ಕಂಸಾಳೆ ನೃತ್ಯ ಪ್ರದರ್ಶಿಸಿದ್ದಾರೆ. ಮದುವೆ ಶುಭ ಸಮಾರಂಭಗಳು, ಗಣೇಶ ಉತ್ಸವ, ಮೃತರ 11ನೇ ದಿನದ ಕಾರ್ಯಕ್ರಮದಲ್ಲಿ ಹಾಡುತ್ತಾರೆ. ಅವರಿಗೆ 2016-17ನೇ ಸಾಲಿನಲ್ಲಿ ಜಿಲ್ಲಾ ಯುವ ಪ್ರಶಸ್ತಿ ಬಂದಿದೆ. ಕನ್ನಡ ಜಾನಪದ ಪರಿಷತ್ ಗೋವಿಂದರಾಜನಗರ ರಾಜ್ಯ ಪ್ರಥಮ ಕನ್ನಡ ಜಾನಪದ ಸಮ್ಮೇಳನ ದಶಮಾನೋತ್ಸವ ಜಾನಪದ ಗೌರವ ಪ್ರಶಸ್ತಿ 2025 ದೊರಕಿದೆ.

# ಅಕ್ಕಮಹಾದೇವಿ ಸ್ತ್ರೀ ಕುಲದ ಅಸ್ಮಿತೆ: ತೀರ್ಥಕುಮಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: 12ನೇ ಶತಮಾನದಲ್ಲಿನ ವೈರಾಗ್ಯ ನಿಧಿ ಅಕ್ಕಮಹಾದೇವಿ ಕನ್ನಡದ ಪ್ರಥಮ ಕವಯಿತ್ರಿಯಾಗಿದ್ದು, ಸ್ತ್ರೀ ಕುಲದ ಅಸ್ಮಿತೆಯಾಗಿದ್ದಾರೆ ಎಂದು ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ತೀರ್ಥಕುಮಾರಿ ವೆಂಕಟೇಶ ಹೇಳಿದರು.

ತಾಲ್ಲೂಕಿನ ತೊಳಲು ಗ್ರಾಮದ ವೈಡಿಎನ್ ಎಂ. ಗ್ರಾಮ ಭಾರತಿ ಪ್ರೌಢ ಶಾಲೆ ಆವರಣದಲ್ಲಿ ವಚನ ಪಿತಾಮಹ ಡಾ. ಫ.ಗು. ಹಳಕಟ್ಟಿ ವಚನ ಸಾಹಿತ್ಯ ಸಂಶೋಧನೆ ಮತ್ತು ವಚನ ಗೀತಾ ಗಾಯನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 12ನೇ ಶತಮಾನದಲ್ಲಿ ವಚನಗಳ ಮೂಲಕ ಸಾಮಾಜಿಕ ಚಿಂತನೆ, ವೈಚಾರಿಕತೆ, ಧಾರ್ಮಿಕ ಓರೆಕೋರೆಗಳ ವಿಶ್ಲೇಷಣೆ ಕಾಯಕ ಶ್ರದ್ಧೆಯೊಂದಿಗೆ ಮಹಿಳೆಯರಿಗೆ ಸ್ವಾತಂತ್ರ್ಯ ಸಮಾನತೆ ನೀಡಿ ಅವರಲ್ಲಿ ವಿಶ್ವಾಸವನ್ನು ಮೂಡಿಸಿದವರು ಶಿವಶರಣರು. ತಮ್ಮ ವಚನಗಳಲ್ಲಿ ಲಿಂಗಾತೀತ ನೆಲೆಯನ್ನು ಪುರಸ್ಕರಿಸಿ, ಲಿಂಗ ತಾರತಮ್ಯದ ಸಮಾಜದಲ್ಲಿ ವಿಚಾರ, ವಿಮರ್ಶೆ ಮಾಡಲು ಅವಕಾಶ ಮಾಡಿಕೊಟ್ಟಿದ್ದು ವಚನ ಚಳವಳಿ. ಹೆಣ್ಣನ್ನು ಮಾಯೆ ಎಂದು ಹೀಗಳೆಯುತ್ತಿದ್ದ ಪುರುಷ ಪ್ರಧಾನ



ಮನೋಧೋರಣೆಗೆ ತಡೆಹಾಕಿ ಹೆಣ್ಣನ್ನು ಹತ್ತಿಕ್ಕುವ ಸಮಾಜದ ಕ್ರೌರ್ಯ ಖಂಡಿಸಿ ಸ್ತ್ರೀ ಸಂವೇದನೆಗೆ ಹೊಸ ಆಯಾಮವನ್ನು ತಂದುಕೊಟ್ಟವರು ವಚನಕಾರರು. ಇದರಿಂದ ಸಮಾಜದಲ್ಲಿ ಮಹಿಳೆಯರಿಗೆ ಸಾಕಷ್ಟು ಅವಕಾಶಗಳು ದೊರೆತು ಅನುಭವ ಮಂಟಪದಲ್ಲಿ ಪುರುಷರ ಸಮಾನವಾಗಿ ಚರ್ಚೆ ಮಾಡಿ ಸಮಾಜಕ್ಕೆ ಮಹಿಳೆಯರ ಕೊಡುಗೆ ಏನೆಂಬುದು ಅವರು ತೋರಿಸಲು ಸಾಧ್ಯವಾಯಿತು ಎಂದರು.

ತಾಲ್ಲೂಕು ಶರಣ ಸಾಹಿತ್ಯ ಪರಿಷ ಅಧ್ಯಕ್ಷ ಹೆಬ್ಬಾಳು ಹಾಲಪ್ಪ ಮಾತನಾಡಿ, ಸಮಾಜದ ಅಂಕು ಡೊಂಕುಗಳನ್ನು ತಿದ್ದುವಲ್ಲಿ ಶರಣರು ರಚಿಸಿರುವ ವಚನಗಳ ಪಾತ್ರ ಮಹತ್ವವಾಗಿದೆ. ದೇಶದಲ್ಲಿ ಸಾಹಿತಿ, ಕಲಾವಿದರು ಹಾಗೂ ವಚನಕಾರರು ಬಹಳಷ್ಟು ಜನ ಆಗಿ ಹೋಗಿದ್ದಾರೆ. ಶೋಷಣೆ ರಹಿತ ಸಮಾಜ ನಿರ್ಮಾಣ ಮಾಡುವಲ್ಲಿ ಅವರು ರಚಿಸಿರುವ ವಚನಗಳ ಪಾತ್ರ ಮಹತ್ತರವಾಗಿದೆ. ಅಂತಹ ಮಹಾನ್ ವ್ಯಕ್ತಿಗಳು ಹಾಕಿಕೊಟ್ಟಿರುವ ಹಾದಿಯಲ್ಲಿ ಎಲ್ಲರೂ ನಡೆಯಬೇಕಾಗಿದೆ. ಬಸವಣ್ಣ ಅವರ ನೇತೃತ್ವದಲ್ಲಿ ನಡೆದ ಸಾಮಾಜಿಕ, ಧಾರ್ಮಿಕ, ಸಾಹಿತ್ಯ ವಿಚಾರ ಕ್ರಾಂತಿಯಿಂದ ಜನಜಾಗೃತಿ ಮೂಡಿಸಿ ಪರಂಪರೆಯಿಂದ ಬಂದ ವರ್ಣಾಶ್ರಮ ಧರ್ಮದಲ್ಲಿ ದಲಿತರಿಗೆ ಅಸ್ಪೃಶ್ಯರಿಗೆ, ಸ್ತ್ರೀಯರಿಗೆ ಗೌರವ ಇಲ್ಲದಿರುವುದರಿಂದ ಜನ ಕಂಗಾಲಾಗಿರುವುದನ್ನು ತಿಳಿದ ಶರಣರು ವರ್ಣ ಬೇಧವನ್ನಳಿಸಿ ಸರ್ವರಿಗೂ ಸ್ವಾತಂತ್ರ್ಯ ನೀಡಿ ಸಮಾನತೆಯನ್ನು ತರಲು ಹೋರಾಡಿದ ಬಗ್ಗೆ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ನಿರಂತರವಾಗಿ ಜಗತ್ತಿನಾದ್ಯಂತ ವಚನ ಸಾಹಿತ್ಯವನ್ನು ಅರಿವು ಮೂಡಿಸಲಾಗುತ್ತಿದೆ ಎಂದರು.

ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಗೌರವಾಧ್ಯಕ್ಷ ಸಿ.ಎಂ. ನಿಂಗರಾಜ್, ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶಶಿರೇಖಾ ರಾಜಶೇಖರ, ಯುವ ಘಟಕದ ಅಧ್ಯಕ್ಷ ಚಂದನ ಕುಮಾರ್, ಕಾರ್ಯದರ್ಶಿಗಳಾದ ಚಂದ್ರೇಗೌಡ, ಉಪಾಧ್ಯಕ್ಷೆ ಗೀತಾ ಶಿವರಾಜ್, ನಿರ್ದೇಶಕರಾದ ಗೌರಮಂಜುನಾಥ ಮತ್ತು ಶಶಿಕಲಾ ಸತೀಶ್, ನಿವೃತ್ತ ಪೋಸ್ಟ್ ಮಾಸ್ಟರ್ ಮಣಿ ದೇವರಾಜ್, ಶರಣ ಸಂಸ್ಕೃತಿ ಚಿಂತಕಿ ನೀಲಾ ನಾಗಭೂಷಣ್, ಮಲ್ಲಿಕಾರ್ಜುನ, ವಿನುತ ಧನಂಜಯ ಹಾಜರಿದ್ದರು.

## ಜು. 20ಕ್ಕೆ ಹಿರೀಸಾವೆಯಲ್ಲಿ ಆರೋಗ್ಯ ಶಿಬಿರ

ಚನ್ನರಾಯಪಟ್ಟಣ: ತಾಲ್ಲೂಕಿನ ಹಿರೀಸಾವೆ ಗ್ರಾಮದ ಶ್ರೀ ಚೌಡೇಶ್ವರಿ ಸಮುದಾಯ ಭವನದಲ್ಲಿ ಬೆಂಗಳೂರಿನ ಕಾಲಭೈರವೇಶ್ವರಸ್ವಾಮಿ ಆಯುರ್ವೇದಿಕ್ ಆಸ್ಪತ್ರೆ ಮತ್ತು ಮೆಡಿಕಲ್ ಕಾಲೇಜು ಹಾಗೂ ಸಂಶೋಧನಾ ಕೇಂದ್ರದ ವೈದ್ಯರಿಂದ ಜು. 20ರ ಭಾನುವಾರ ಆರೋಗ್ಯ ಉಚಿತ ತಪಾಸಣೆ ಮತ್ತು ಆಯುರ್ವೇದ ಪದ್ಧತಿಯ ಔಷಧ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕಾಲೇಜಿನ ಸಹ ಪ್ರಾಧ್ಯಾಪಕ ಡಾ. ಕಿರಣ್ ಕುಮಾರ್ ತಿಳಿಸಿದ್ದಾರೆ. ಹಿರೀಸಾವೆ ಗ್ರಾಮ ಪಂಚಾಯಿತಿ, ಕೃಷಿ ಪತ್ತಿನ ಸಹಕಾರ ಸಂಘ ಮತ್ತು ಕನ್ನಡ ಸಾಹಿತ್ಯ ಪರಿಷತ್ ಹೋಬಳಿ ಘಟಕದ ಸಹಯೋಗದಲ್ಲಿ ಶಿಬಿರ ಜರುಗಲಿದ್ದು, ಮಂಡಿ ನೋವು, ಕೈ ಕಾಲು ಸಂಧಿ ನೋವು, ಸಕ್ಕರೆ ಕಾಯಿಲೆ, ರಕ್ತದೊತ್ತಡ, ಮೂಗು, ಗಂಟಲು, ತಲೆನೋವು, ನರ ರೋಗಗಳು, ಮಹಿಳೆಯರ ಆರೋಗ್ಯ ಸಮಸ್ಯೆಗಳು ಸೇರಿದಂತೆ ಎಲ್ಲಾ ರೀತಿಯ ಆರೋಗ್ಯ ಸಮಸ್ಯೆಗಳ ಬಗ್ಗೆ ತಜ್ಞ ವೈದ್ಯರು ಪರೀಕ್ಷೆ ನಡೆಸಿ, ಸೂಕ್ತ ಸಲಹೆ, ಚಿಕಿತ್ಸೆ ಮತ್ತು ಉಚಿತ ಆಯುರ್ವೇದ ಔಷಧಿ ನೀಡಲಿದ್ದಾರೆ. ಅಂದು ಬೆಳಿಗ್ಗೆ 11 ಗಂಟೆಗೆ ಶಾಸಕ ಸಿ.ಎನ್. ಬಾಲಕೃಷ್ಣ ಉದ್ಘಾಟಿಸಲಿದ್ದಾರೆ. ಹೋಬಳಿ ಸಾಹಿತ್ಯ ಪರಿಷತ್ ಅಧ್ಯಕ್ಷ ಪ್ರಮೋದ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಜಯಮ್ಮ ಬೋರಯ್ಯ, ಪಿಎಸಿಸಿಬಿ ಅಧ್ಯಕ್ಷ ಮಹೇಶ್ ಭಾಗವಹಿಸಲಿದ್ದಾರೆ.

## ಇತಿಹಾಸದಲ್ಲಿ ಈ ದಿನ

### ಜುಲೈ-18

1872: ಬ್ರಿಟನ್‌ನಲ್ಲಿ **Ballot Act** ಅಂಗೀಕರಿಸಲಾಯಿತು. ಇದು ಗೋಪ್ಯ ಮತದಾನವನ್ನು ಕಾನೂನಿನ ಭಾಗವನ್ನಾಗಿ ಮಾಡಿತು.

1925: ಅಡಾಲ್ಫ್ ಹಿಟ್ಲರ್‌ನ **Mein Kampf** ಎಂಬ ಪುಸ್ತಕದ ಮೊದಲ ಭಾಗ ಜರ್ಮನಿಯಲ್ಲಿ ಪ್ರಕಟವಾಯಿತು.

1947: ಬೃಹತ್ ಬ್ರಿಟಿಷ್ ರಾಜ್ಯದಿಂದ ಭಾರತ ಹಾಗೂ ಪಾಕಿಸ್ತಾನ ಎಂಬ ಹೊಸ ರಾಷ್ಟ್ರಗಳಾಗಿ ವಿಭಜನೆಗೆ ಸಂಬಂಧಿಸಿದಂತೆ ಬ್ರಿಟಿಷ್ ಸಂಸತ್ತಿನಲ್ಲಿ **Indian Independence Act** ಅಂಗೀಕಾರವಾಯಿತು.

1951: ಜೆ.ಡಿ. ಟಿಪ್ಪಣ್ಣ ಅವರು ಕರ್ನಾಟಕ ವಿಶ್ವವಿದ್ಯಾನಿಲಯದ ಮೊದಲ ಕುಲಪತಿಯಾಗಿ ಅಧಿಕಾರ ಸ್ವೀಕರಿಸಿದರು.

**ಜನನ**

1918: ನೆಲ್ಸನ್ ಮಂಡೆಲಾ, ದಕ್ಷಿಣ ಆಫ್ರಿಕಾದ ಉತ್ಕೃಷ್ಟ ನಾಯಕ ಹಾಗೂ ಮಾನವ ಹಕ್ಕುಗಳ ಹೋರಾಟಗಾರ.

1909: ಎಸ್.ಎನ್. ಬೋಷ್, ಗಣಿತಜ್ಞರು ಮತ್ತು ಗಣಿತೀಯ ಭೌತವಿಜ್ಞಾನದಲ್ಲಿ ಖ್ಯಾತರಾಗಿದ್ದವರು.

**ಮರಣ**

1610: ಕಾರ್ಲೋ ಜೆಸುಲ್ಡೋ, ಇಟಾಲಿಯನ್ ಸಂಗೀತಗಾರ.

1954: ಮಾಚಿದ್ರಾ ಕಾಮತ್, ಗೀತರಚನೆಗಾರ ಹಾಗೂ ಗಾಯಕ.

# ಶ್ರವಣೂರು ಕೆರೆ ಉಳಿಸಲು ಗ್ರಾಮಸ್ಥರ ಪ್ರತಿಭಟನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಕಲಿ ದಾಖಲೆ ಸೃಷ್ಟಿಸಿ ಕೆರೆ ಒತ್ತುವರಿ ಮಾಡಿರುವುದನ್ನು ತೆರವುಗೊಳಿಸಬೇಕು ಎಂದು ಒತ್ತಾಯಿಸಿ ಹೊಳೆನರಸೀಪುರ ತಾಲ್ಲೂಕು ಶ್ರವಣೂರು ಗ್ರಾಮಸ್ಥರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಗ್ರಾಮದ ಮಂಜೇಗೌಡ ಎಂಬುವರು ನಕಲಿ ದಾಖಲೆಗಳನ್ನ ಸೃಷ್ಟಿ ಮಾಡಿ ಕೆರೆ ಭೂಮಿ ಲಪಟಾಯಿಸಲು ಸಂಚು ಮಾಡಿದ್ದಾರೆ. ಅದಕ್ಕೆ ಅವಕಾಶ ಮಾಡಿಕೊಡಬಾರದು. ಇದೇ ವಿಚಾರವಾಗಿ ಮಂಜೇಗೌಡ ಅವರ ಅರ್ಜಿ 2018ರಲ್ಲಿ ಉಪವಿಭಾಗಾಧಿಕಾರಿ ನ್ಯಾಯಾಲಯದಲ್ಲಿ ವಜಾಗೊಂಡಿದೆ. ಆದರೂ ಮತ್ತೆ ನಕಲಿ ದಾಖಲೆ ಸೃಷ್ಟಿ ಮಾಡಿ ಜಿಲ್ಲಾಧಿಕಾರಿ ಕೋರ್ಟ್ ಮೂಲಕ ಭೂಮಿ ಲಪಟಾಯಿಸಲು ಯತ್ನ ಮಾಡಿದ್ದಾರೆ ಎಂದು ಪ್ರತಿಭಟನಾಕಾರರು ದೂರಿದರು. ಒಟ್ಟು 2 ಎಕರೆ ಭೂಮಿಗೆ ನಕಲಿ ದಾಖಲೆ ಸೃಷ್ಟಿ ಮಾಡಲಾಗಿದೆ.

ತಹಶೀಲ್ದಾರ್, ಗ್ರಾಮ ಲೆಕ್ಕಾಧಿಕಾರಿ, ಕಂದಾಯ ನಿರೀಕ್ಷಕ ಸೇರಿ ಮೊದಲಾದವರು ಸ್ಥಳ ಮಹಜರು ಮಾಡಿದ ವೇಳೆ ವ್ಯತಿರಿಕ್ತ ಹೇಳಿಕೆ ದಾಖಲಾಗಿದ್ದರೂ, ಸರ್ಕಾರಿ ಭೂಮಿ ಖಾಸಗಿ ವ್ಯಕ್ತಿಯ ಪಾಲಾಗುತ್ತಿದೆ. ಕೂಡಲೇ ಜಿಲ್ಲಾಧಿಕಾರಿ ನ್ಯಾಯಾಲಯ ಗ್ರಾಮಸ್ಥರಿಗೆ ಕೆರೆಯನ್ನು ಉಳಿಸುವ ನಿಟ್ಟಿನಲ್ಲಿ ಆದೇಶ ನೀಡಬೇಕು ಎಂದು ಒತ್ತಾಯಿಸಿದರು.

ಕಳೆದ ವರ್ಷ ಏಕಾಏಕಿ ಕೆರೆ ಜಾಗ ಉಳುಮೆ ಮಾಡಲು ಬಂದಾಗ ಅಕ್ರಮ ಬಯಲಾಗಿದೆ. ಹಲವು ವರ್ಷಗಳಿಂದ ಸಾಗುವಳಿ ಮಾಡುತ್ತಿರುವಂತೆ ಸರ್ಕಾರಿ ದಾಖಲೆ ತಿದ್ದಲಾಗಿದೆ. ಅಧಿಕಾರಿಗಳು ಸ್ಥಳ ಪರಿಶೀಲನೆ ವೇಳೆ ಕೆರೆ ಭೂಮಿಯಲ್ಲಿ ಯಾವುದೇ ಕೃಷಿ ಮಾಡಿದಿರುವುದು ದೃಢಪಟ್ಟಿದೆ. ಅಷ್ಟೇ ಅಲ್ಲ ಎಲ್ಲಾ ಅಧಿಕಾರಿಗಳು ಸ್ಥಳ ಮಹಜರು ಮಾಡಿದಾಗಲೂ ಕೆರೆ ಭೂಮಿ ಎಂದೇ ದಾಖಲೆ ಇದ್ದರೂ ನಕಲಿ ದಾಖಲೆ ಸೃಷ್ಟಿಸಿ ಕೆರೆ ಭೂಮಿ ಕಬಳಿಸಲು ಹೊರಟಿರುವುದನ್ನು ತಡೆಯಬೇಕು ಎಂದು ಒತ್ತಾಯಿಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

## ಅನಾರೋಗ್ಯ: ಹೆಡ್ ಕಾನ್‌ಸ್ಟೇಬಲ್ ಆತ್ಮಹತ್ಯೆ

ಹಾಸನ: ಮೂಳೆ ಕ್ಯಾನ್ಸರ್‌ನಿಂದ ಬಳಲುತ್ತಿದ್ದ ಹೆಡ್ ಕಾನ್‌ಸ್ಟೇಬಲ್ ಮಾನಸಿಕವಾಗಿ ನೊಂದು ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ನಗರದ ಹೊರ ವಲಯದ ಗೆಂಡೆಕಟ್ಟೆ ಅರಣ್ಯದಲ್ಲಿ ಬುಧವಾರ ಸಂಜೆ ನೇಣಿಗೆ ಶರಣಾಗಿದ್ದಾರೆ.



ನಟೇಶ್ (38) ಆತ್ಮಹತ್ಯೆ ಶರಣಾದ ಪೊಲೀಸ್ ಕಾನ್‌ಸ್ಟೇಬಲ್. ಅರಕಲಗೂಡು ತಾಲ್ಲೂಕಿನ ಚಿಕ್ಕಬೊಮ್ಮನಹಳ್ಳಿ ಗ್ರಾಮದ ನಟೇಶ್, 2008 ನೇ ಸಾಲಿನಲ್ಲಿ ನಾಗರೀಕ ಪೊಲೀಸ್ ಪೇದೆಯಾಗಿ ಆಯ್ಕೆಯಾಗಿ ಪೊಲೀಸ್ ಕರ್ತವ್ಯ ಆರಂಭಿಸಿದ್ದರು. ಸದ್ಯ ಅರಕಲಗೂಡು ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ನಟೇಶ್ ಅವರಲ್ಲಿ, ಕಳೆದ 3 ತಿಂಗಳಿನಿಂದ ಮೂಳೆ ಕ್ಯಾನ್ಸರ್ ಕಾಯಿಲೆಯಿಂದ ಬಳಲುತ್ತಿದ್ದರು. ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಅಲ್ಲಿಂದ ಬಂದು ಕಳೆದೊಂದು ವಾರದಿಂದ ಹಾಸನ ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಾಗಿದ್ದರು. ಬುಧವಾರ ಸಂಜೆಯಿಂದ ಆಸ್ಪತ್ರೆಯಿಂದ ನಟೇಶ್ ದಿಢೀರ್ ಕಾಣೆಯಾಗಿದ್ದರು. ಆದರೆ ಬೆಳಗ್ಗೆ ಗೆಂಡೆಕಟ್ಟೆ ಅರಣ್ಯಧಾಮದ ಬಳಿ ಆತ್ಮಹತ್ಯೆಗೆ ಶರಣಾಗಿರುವುದು ಬಯಲಾಗಿದೆ. ಒಂದು ತಿಂಗಳ ಹಿಂದಷ್ಟೇ ಮುಖ್ಯ ಪೇದೆಯಾಗಿ ನಟೇಶ್ ಮುಂಬಡ್ತಿ ಹೊಂದಿ, ಹೊಳೆನರಸೀಪುರ ಪೊಲೀಸ್ ಠಾಣೆಗೆ ವರ್ಗಾವಣೆಯಾಗಿದ್ದರು. ಆದರೆ ಗುಣವಾಗದ ಕ್ಯಾನ್ಸರ್ ಕಾಯಿಲೆಯಿಂದ ಮನನೊಂದು ಕಡೆಗೆ ಜೀವ ಕಳೆದುಕೊಂಡಿದ್ದಾರೆ. ಸ್ಥಳಕ್ಕೆ ಬಡಾವಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಅಕ್ರಮ ವಲಸಿಗರ ಪರಿಶೀಲಿಸಿದ ಅಧಿಕಾರಿಗಳು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಕೊಣನೂರು: ಬಾಂಗ್ಲಾ ಮೂಲದ ಕಾರ್ಮಿಕರು ಉತ್ತರ ಭಾರತದವರ ಸೋಗಿನಲ್ಲಿ ಕೂಲಿ ಕಾರ್ಮಿಕರಾಗಿ ನೆಲೆಸಿರುವ ಅನುಮಾನದ ಹಿನ್ನೆಲೆಯಲ್ಲಿ ಕಾರ್ಮಿಕ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕೊಣನೂರು ಹೋಬಳಿಯ ಸಬ್ಬತ್ತಿ ಬಳಿಯಿರುವ ಶುಂಠಿ ಶುದ್ಧೀಕರಣ ಘಟಕ, ರಾಮನಾಥಪುರದ ಕೃಷ್ಣ ಸಿಮೆಂಟ್ ಪ್ರಾಡಕ್ಟ್ ಮತ್ತು ಹೋಬಳಿಯ ಹನ್ಯಾಳು ಗ್ರಾಮದ ಸಮೀಪ ಪ್ರಗತಿಯಲ್ಲಿರುವ ಜಲಜೀವನ್ ಮಿಷನ್ ಕಾಮಗಾರಿಯ ಬಳಿ ತೆರಳಿದ ಹಾಸನ ಜಿಲ್ಲಾ ಕಾರ್ಮಿಕ ಅಧಿಕಾರಿಯಮುನಾ ಅವರ ನೇತೃತ್ವದಲ್ಲಿ ತೆರಳಿದ ತಂಡವು ಕಾರ್ಮಿಕರ ಆಧಾರ್ ಕಾರ್ಡ್ ದಾಖಲೆ ಪರಿಶೀಲನೆ ನಡೆಸಿ ಮಾಹಿತಿ ಸಂಗ್ರಹಿಸಿದರು. ನಕಲಿ ಗುರತಿನ ಚೀಟಿಗಳೊಂದಿಗೆ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಅನುಮಾನಗಳಿದ್ದಲ್ಲಿ ಕೂಲಂಕಷವಾಗಿ



ತನಿಖೆ ನಡೆಸಿದರು. ಅಸ್ಸಾಂ, ಬಿಹಾರ, ಒಡಿಶಾ, ಉತ್ತರ ಪ್ರದೇಶ, ತಮಿಳುನಾಡು ಮೂಲದ ಮತ್ತಿತರ ಹೊರ ರಾಜ್ಯಗಳ ವಲಸೆ ಕಾರ್ಮಿಕರು ವಿವಿಧೆಡೆ ದುಡಿಯುತ್ತಿರುವ ಸ್ಥಳಕ್ಕೆ ಭೇಟಿ ನೀಡಿದ ಅಧಿಕಾರಿಗಳು ದಾಖಲೆ ಪರಿಶೀಲನೆ ಮಾಡಿದರು. ಕಡಿಮೆ ವೇತನ ಮತ್ತು ಅನಾರೋಗ್ಯಕರ ಪರಿಸ್ಥಿತಿಯಲ್ಲಿ ಕೆಲಸ ಮಾಡುತ್ತಿರುವ ಬಗ್ಗೆ ಪ್ರಶ್ನೆ ಮಾಡಿದರು.

ಹನ್ಯಾಳು ಗ್ರಾಮದ ಬಳಿ ಜಲಜೀವನ್ ಮಿಷನ್ ಕಾಮಗಾರಿ ಘಟಕದಲ್ಲಿ ಕೆಲಸ ಮಾಡುತ್ತಿರುವ ಹೊರ ರಾಜ್ಯದ ಸಿಬ್ಬಂದಿ ಆಧಾರ್ ಕಾರ್ಡ್ ತಪಾಸಣೆ ಮಾಡಿ, ಕಾರ್ಮಿಕ ಇಲಾಖೆಗೆ ಕಾರ್ಮಿಕರ ಸೆಸ್ ಪಾವತಿಸಿದ ಕಾರಣ ನೋಟಿಸ್ ನೀಡಿದರು.

ಕಾರ್ಮಿಕ ಇಲಾಖೆಯ ನಿರೀಕ್ಷಕ ರಘು, ಗುಪ್ತಚರ ಇಲಾಖೆಯ ಸಬ್ ಇನ್‌ಸ್ಪೆಕ್ಟರ್ ಕಿರಣ್, ಗುಪ್ತಚರ ಇಲಾಖೆ ಸಿಬ್ಬಂದಿ ನಾಗರಾಜ್ ಇದ್ದರು.

## ಎ.ಆರ್.ಟಿ.ಓ ಅಮಾನತುಗೊಳಿಸಲು ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಕಲೇಶಪುರ ತಾಲ್ಲೂಕಿನ ಎಆರ್‌ಟಿಓ ಕಚೇರಿಯಲ್ಲಿ ದಲ್ಲಾಳಿ ಮೋಹನ್ ಶೆಟ್ಟಿ ಎಂಬುವರ ಹುಟ್ಟುಹಬ್ಬವನ್ನು ಕಚೇರಿ ಸಮಯದಲ್ಲೇ ಆಚರಿಸಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಿ ಅಮಾನತುಗೊಳಿಸಬೇಕು ಎಂದು ಮಲೆನಾಡು ರಕ್ಷಣಾ ಸೇನೆ ಜಿಲ್ಲಾಧ್ಯಕ್ಷ ಬಿ.ಎಸ್. ದರ್ಶನ್ ಒತ್ತಾಯಿಸಿದರು.

ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಜು.11 ರಂದು ಎಆರ್‌ಟಿಓ ಮಧುರಾ ಹಾಗೂ ಕಚೇರಿ ಸಿಬ್ಬಂದಿ ಸೇರಿ ಹಾರ ತುರಾಯಿ ಹಾಕಿ, ಕೇಕ್ ಕತ್ತರಿಸಿ ಸಂಭ್ರಮಿಸುವ ಮೂಲಕ ಹುಟ್ಟುಹಬ್ಬವನ್ನು ಆಚರಿಸಿದ್ದಾರೆ. ಕರ್ತವ್ಯದ ಸಮಯವನ್ನು ದುರುಪಯೋಗಪಡಿಸಿಕೊಂಡಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಜು. 18ರಂದು ಸಕಲೇಶಪುರ ತಾಲ್ಲೂಕು ಕಚೇರಿಯಿಂದ ಎಆರ್‌ಟಿಓ ವರೆಗೆ ಪ್ರತಿಭನಾ ಮೆರವಣಿಗೆ ನಡೆಸಿ, ಕಚೇರಿ ಎದುರು ಕೇಕ್ ಕತ್ತರಿಸಿ ಧರಣಿ ನಡೆಸಲಾಗುವುದು ಎಂದು ತಿಳಿಸಿದರು.

ಸಂಘದ ಉಪಾಧ್ಯಕ್ಷ ಹೆಚ್ .ಸಿ.ನಾಗೇಂದ್ರ ಹೊಸಕೋಲು, ಜಂಟಿ ಕಾರ್ಯದರ್ಶಿ ಪಾಲಾಕ್ಷ ಹೆಚ್.ಎಸ್. ಸಂಚಾಲಕ ಶರತ್ ಶೆಟ್ಟಿ, ಸಹ ಸಂಚಾಲಕ ಆನಂದ್, ಯುವರಾಜ್ ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248